ದೂರವಾಣಿ: 7022254997

# ಕುವೆಂಪು ವಿಶ್ವವಿದ್ಯಾಲಯ

ಸಂಖ್ಯೆ:ಕುವಿ/ಪವಿ/ಯು.ಜಿ/10130/2017-18

ಕುಲಸಚಿವ(ಪರೀಕ್ಷಾಂಗ)ರವರ ಕಛೇರಿ
ಜ್ಞಾನಸಹ್ಯಾದ್ರಿ, ಶಂಕರಘಟ್ಟ-577451
ದಿನಾಂಕ: 17-03-2018

## ಪ್ರಕಟಣೆ

**ವಿಷಯ:** ಏಪ್ರೀಲ್/ಮೇ-2018ರಲ್ಲಿ ನಡೆಯುವ ಎಲ್ಲಾ ಸ್ನಾತಕ ಪದವಿಯ ಸೆಮಿಸ್ಟರ್‌ನ ದ್ವಿಗುಣ ಅವಧಿ (***Double the Duration***) ಪೂರೈಸಿದ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಅರ್ಜಿ ಸಲ್ಲಿಸುವ ಹಾಗೂ ಪರೀಕ್ಷಾ ಶುಲ್ಕ ಪಾವತಿಸುವ ಕುರಿತು.
**ಉಲ್ಲೇಖ:** ದಿನಾಂಕ: 15-03-2018ರ ಸಿಂಡಿಕೇಟ್ ಸಭೆಯ ನಿರ್ಣಯ.

*****

ಎಲ್ಲಾ ಸ್ನಾತಕ ಪದವಿ ಸೆಮಿಸ್ಟರ್‌ನ ಲಿಖಿತ ಪರೀಕ್ಷೆಗಳು ದಿನಾಂಕ:09.04.2018ರಿಂದ ನಡೆಯಲಿವೆ. ಶಿವಮೊಗ್ಗ ಮತ್ತು ಚಿಕ್ಕಮಗಳೂರು ಜಿಲ್ಲೆಯ ಎಲ್ಲಾ ಕಾಲೇಜಿನ ಸೆಮಿಸ್ಟರ್‌ನ ದ್ವಿಗುಣಅವಧಿ (***Double the Duration)*** ಪೂರೈಸಿದ ವಿದ್ಯಾರ್ಥಿಗಳು ಪರೀಕ್ಷೆಯನ್ನು ಆಯಾಯ ಕಾಲೇಜಿನಲ್ಲಿ ಬರೆಯಬೇಕು.

ಚಿತ್ರದುರ್ಗ ಮತ್ತು ದಾವಣಗೆರೆ ಜಿಲ್ಲೆಯ ಎಲ್ಲಾ ಕಾಲೇಜಿನ ಸೆಮಿಸ್ಟರ್ ವಿದ್ಯಾರ್ಥಿಗಳು ಶಿವಮೊಗ್ಗದ ಸಹ್ಯಾದ್ರಿ ಕಾಲೇಜನ್ನು ಪರೀಕ್ಷಾ ಕೇಂದ್ರವನ್ನಾಗಿಸಿಕೊಂಡು (ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಚಾಲ್ತಿಯಲ್ಲಿರುವ ಪಠ್ಯಕ್ರಮ) ಪರೀಕ್ಷೆಗಳನ್ನು ತೆಗೆದುಕೊಳ್ಳಲು ಅವಕಾಶ ನೀಡಲಾಗಿದೆ.

**(ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8183098138, 8183098136,7022254997)**

**ದ್ವಿಗುಣ ಅವಧಿ ಪೂರ್ಣಗೊಳಿಸಿರುವ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಮಾತ್ರ.**

| ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ದಿನಾಂಕಗಳು: | | |
|---|---|---|
| 1 | ದಂಡ ಶುಲ್ಕವಿಲ್ಲದೆ | 24-03-2018 ರವರೆಗೆ |
| 3 | ದಂಡ ಶುಲ್ಕ ರೂ. 100=00ರಂತೆ (ಪ್ರತಿ ಸೆಮ್) | 25-03-2018 ರಿಂದ 26-03-2018 ರವರೆಗೆ |
| 4 | ದಂಡ ಶುಲ್ಕ ರೂ. 500=00ರಂತೆ (ಪ್ರತಿ ಸೆಮ್) | 27-03-2018 ಮತ್ತು 28-03-2018 ರವರೆಗೆ |

| | B.A/B.Sc/B.Com | | BBM / BBA / B.C.A / B.S.W | |
|---|---|---|---|---|
| 1 | ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ರೂ. 470/- | ಸೆಮಿಸ್ಟರ್ ಪೂರ್ಣ ಪರೀಕ್ಷೆಗೆ | ರೂ. 800/- |
| 2 | ಪ್ರತಿ ಪತ್ರಿಕೆಗೆ ಥಿಯರಿ ಪರೀಕ್ಷೆ ಪ್ರತ್ಯೇಕವಾಗಿ (ಪ್ರತಿ ಸೆಮಿಸ್ಟರ್ ಎಲ್ಲಾ ಪತ್ರಿಕೆಗಳಿಗೆ ರೂ.470/-ಕ್ಕೆ ಒಳಪಟ್ಟು) | ರೂ. 150/- | ಪ್ರತಿ ಪತ್ರಿಕೆಗೆ ಥಿಯರಿ ಪರೀಕ್ಷೆ ಪ್ರತ್ಯೇಕವಾಗಿ (ಪ್ರತಿ ಸೆಮಿಸ್ಟರ್ ಎಲ್ಲಾ ಪತ್ರಿಕೆಗಳಿಗೆ ರೂ.800/-ಕ್ಕೆ ಒಳಪಟ್ಟು) | ರೂ. 180/- |
| 3 | ಪ್ರಾಯೋಗಿಕ ಪರೀಕ್ಷೆಗೆ ಪ್ರತಿ ಪತ್ರಿಕೆಗೆ | ರೂ. 100/- | ಪ್ರಾಯೋಗಿಕ ಪರೀಕ್ಷೆಗೆ ಪ್ರತಿ ಪತ್ರಿಕೆಗೆ | ರೂ. 100/- |
| 4 | ಅಂಕಪಟ್ಟಿ ಶುಲ್ಕ (ಪ್ರತಿ ಸೆಮಿಸ್ಟರ್‌ಗೆ) | ರೂ. 180/- | ಅಂಕಪಟ್ಟಿ ಶುಲ್ಕ (ಪ್ರತಿ ಸೆಮಿಸ್ಟರ್‌ಗೆ) | ರೂ. 180/- |
| 5 | ವಿಶೇಷ ಶುಲ್ಕ ಪ್ರತಿ ವಿದ್ಯಾರ್ಥಿಗೆ ರೂ. 2500/- | | | |

## ವಿದ್ಯಾರ್ಥಿಗಳಿಗೆ ಸೂಚನೆ:

1. ವಿದ್ಯಾರ್ಥಿಗಳು online ಮುಖಾಂತರ ಅರ್ಜಿ ಸಲ್ಲಿಸಲು student.logisys.net.in/kus ನಲ್ಲಿ login ಆಗಿ ನೊಂದಣಿ ಸಂಖ್ಯೆ, ನಮೂದಿಸಿ ಪರೀಕ್ಷೆ ತೆಗೆದುಕೊಳ್ಳುವ ಸೆಮಿಸ್ಟರ್‌ವಾರು/ವಿಷಯವಾರು ಗುರುತು ಮಾಡಿದ ನಂತರ ಶುಲ್ಕದ ವಿವರಗಳುಳ್ಳ ಅರ್ಜಿ ಮುದ್ರಿಸಿ ಇಂಟರ್‌ನೆಟ್ ಬ್ಯಾಂಕಿನಲ್ಲಿ ಅಥವಾ ಯಾವುದೇ ಅಂಚೆ ಕಛೇರಿಯಲ್ಲಿ ಶುಲ್ಕ ಭರಿಸಿದ ನಂತರ ಪ್ರತಿಯನ್ನು ಕಾಲೇಜುಗಳಲ್ಲಿ ಸಲ್ಲಿಸಬೇಕು.
2. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು ಯಾವುದೇ ATM (Debit) Card/Credit Card/Online ವೈಯಕ್ತಿಕ ಖಾತೆಯಿಂದ Banking ಮೂಲಕ SBMನ Pay U/ Paytm wallet ಮೂಲಕ ನೇರವಾಗಿ (ವಿದ್ಯಾರ್ಥಿಯ ವೈಯಕ್ತಿಕ ಅಥವಾ ಪೋಷಕರ ಬ್ಯಾಂಕ್ ಖಾತೆಯಿಂದ ಮಾತ್ರ) ಹಣಪಾವತಿಸಬಹುದಾಗಿದೆ ಅಥವಾ ಆನ್‌ಲೈನ್‌ನಲ್ಲಿ ಚಲನ್ ಮುದ್ರಿಸಿಕೊಂಡು ಅಂಚೆಕಛೇರಿ ಮುಖಾಂತರ ಪಾವತಿಸಿದ ನಂತರ ಸಂಬಂಧಿಸಿದ ಚಲನ್ ಪ್ರತಿ ಮತ್ತು ದಾಖಲಾತಿಗಳನ್ನು ಕಾಲೇಜಿಗೆ ಸಲ್ಲಿಸಬೇಕು. ನಿಗದಿಪಡಿಸಿದ ದಿನಾಂಕದ ನಂತರ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಮಾನ್ಯ ಮಾಡಲಾಗುವುದಿಲ್ಲ.

**ವಿಶೇಷ ಸೂಚನೆ:** ವಿದ್ಯಾರ್ಥಿಗಳು **Internet Browsing centre**ನ ಮಾಲಿಕರ ಬ್ಯಾಂಕ್‌ಖಾತೆಯ ಮೂಲಕ ವಿಶ್ವವಿದ್ಯಾಲಯಕ್ಕೆ ಹಣ ಪಾವತಿಸಿದಲ್ಲಿ ಉಂಟಾಗುವ ತಾಂತ್ರಿಕ ತೊಂದರೆಗಳಿಗೆ ವಿದ್ಯಾರ್ಥಿಗಳೇ ಜವಾಬ್ದಾರರು.

## ಪ್ರಾಚಾರ್ಯರಿಗೆ ಸೂಚನೆಗಳು

1. ವಿದ್ಯಾರ್ಥಿಗಳು ಪಾವತಿಸಿ ಸಲ್ಲಿಸಿದ ಚಲನ್‌ನ್ನು ಪರಿಶೀಲಿಸಿ ಕೊನೆ ದಿನಾಂಕದಿಂದ ಎರಡು ದಿನದೊಳಗಾಗಿ ಪ್ರಾಂಶುಪಾಲರ ಮೇಲುಸಹಿಯೊಂದಿಗೆ ಚಲನ್ ಪ್ರತಿ ಹಾಗೂ ಇತರೆ ದಾಖಲೆಗಳೊಂದಿಗೆ ವಿಶ್ವವಿದ್ಯಾಲಯಕ್ಕೆ ಸಲ್ಲಿಸಬೇಕು. ನಂತರ ಕಳುಹಿಸುವ ಅರ್ಜಿಗಳನ್ನು ಮಾನ್ಯಮಾಡುವುದಿಲ್ಲ.
2. ತಮ್ಮ ಕಾಲೇಜಿಗೆ ಸಂಬಂಧಿಸಿದ ಅನುತ್ತೀರ್ಣಗೊಂಡ ದ್ವಿಗುಣ ಅವಧಿ ಪೂರೈಸಿದ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಿ ಈ ಅಂತಿಮ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಲು ತಿಳಿಸುವುದು.

17/3/18

(ಪ್ರೊ. ರಾಜಾ ನಾಯಕ)
ಕುಲಸಚಿವರು(ಪರೀಕ್ಷಾಂಗ)

**ಕುಲಸಚಿವ (ಪರೀಕ್ಷಾಂಗ)**
**ಕುವೆಂಪು ವಿಶ್ವವಿದ್ಯಾನಿಲಯ**
**ಜ್ಞಾನ ಸಹ್ಯಾದ್ರಿ**
**ಶಂಕರಘಟ್ಟ-577451, ಶಿವಮೊಗ್ಗ ಜಿಲ್ಲೆ**

ಗೆ,
ಕುವೆಂಪು ವಿಶ್ವವಿದ್ಯಾನಿಲಯದ ಶಿವಮೊಗ್ಗ / ಚಿಕ್ಕಮಗಳೂರು / ದಾವಣಗೆರೆ ಮತ್ತು ಚಿತ್ರದುರ್ಗ ಜಿಲ್ಲೆಯ ವ್ಯಾಪ್ತಿಗೊಳಪಡುವ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

17/3/18

**ಪ್ರತಿಗಳು;**

1. ಸಮಾಜಕಲ್ಯಾಣಾಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ, ಶಿವಮೊಗ್ಗ/ಚಿಕ್ಕಮಗಳೂರು.
2. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
3. ನಿರ್ದೇಶಕರು, ಪಿ.ಎಂ.ಇ. ಮಂಡಳಿ, ಕುವೆಂಪು ವಿಶ್ವವಿದ್ಯಾಲಯ ಶಂಕರಘಟ್ಟ.
4. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ ಶಿವಮೊಗ್ಗ, ಚಿಕ್ಕಗಳೂರು, ದಾವಣಗೆರೆ, ಚಿತ್ರದುರ್ಗ- ಎಲ್ಲಾ ದಿನ ಪತ್ರಿಕೆಗಳಲ್ಲಿ ಪ್ರಕಟಿಸುವಂತೆ ಕೋರಿದೆ.
5. ಗ್ರಂಥಪಾಲಕರು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ-ಸದರಿ ಅಧಿಸೂಚನೆಯನ್ನು ವಿಶ್ವವಿದ್ಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವಂತೆ ಕೋರಲಾಗಿದೆ.
6. ಉಪಕುಲಸಚಿವರು:ಸಹಾಯಕ ಕುಲಸಚಿವರು, ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ.
7. ಅಧೀಕ್ಷಕರು, ಕಂಪ್ಯೂಟರ್ ವಿಭಾಗ / ಪರೀಕ್ಷಾ ವಿಭಾಗ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
8. ಆಪ್ತಶಾಖೆ, ಮಾನ್ಯಕುಲಪತಿ, ಕುಲಸಚಿವ(ಆಡಳಿತ), ಕುಲಸಚಿವ(ಪರೀಕ್ಷಾಂಗ), ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ.
9. ಸಂಯೋಜಕರು, UCCF ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ-ಮಾಹಿತಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಬಗ್ಗೆ.
10. ಕಛೇರಿ ಪ್ರತಿ.